# ಕರ್ನಾಟಕ ಸರ್ಕಾರ

**ಸಂಖ್ಯೆ:** ಸಿಆಸುಇ (ಆಸು) 11 ಇಆಸು 2022

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 24-03-2022.

## ಸುತ್ತೋಲೆ

**ವಿಷಯ:** ರಾಜ್ಯ ಸರ್ಕಾರದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನಗಳನ್ನು ಸಲ್ಲಿಸುವ ಬಗ್ಗೆ.

**ಉಲ್ಲೇಖ :** 1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 105 ಇಆಸು 2011, ದಿನಾಂಕ: 20-11-2012
2. ತಿದ್ದುಪಡಿ ಆದೇಶ ಸಂಖ್ಯೆ: ಸಿಆಸುಇ 105 ಇಆಸು 2011, ದಿನಾಂಕ: 15-04-2013.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 104 ಇಆಸು 2019, ದಿನಾಂಕ:07-12-2019.
4. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 11 ಇಆಸು 2022. ದಿನಾಂಕ:19-03-2022.

***************

ರಾಜ್ಯ ಸರ್ಕಾರದ ಅಧಿಕಾರಿ/ನೌಕರರಿಗೆ "ಸರ್ವೋತ್ತಮ ಸೇವಾ ಪ್ರಶಸ್ತಿ" ನೀಡುವ ಯೋಜನೆಯನ್ನು 2012 ರಿಂದ ಜಾರಿಗೆ ತರಲಾಗಿದೆ. ಪ್ರಸ್ತುತ 2022 ನೇ ಸಾಲಿನಲ್ಲಿ **ರಾಜ್ಯ ಮಟ್ಟ ಹಾಗೂ ಜಿಲ್ಲಾ ಮಟ್ಟದ "ಸರ್ವೋತ್ತಮ ಸೇವಾ ಪ್ರಶಸ್ತಿ"** ಪಡೆಯಲು ರಾಜ್ಯ ಸರ್ಕಾರದ ಅಧಿಕಾರಿ/ನೌಕರರು ತಮ್ಮ ನಾಮನಿರ್ದೇಶನಗಳನ್ನು ಆನ್ ಲೈನ್ ಮೂಲಕ ಮಾತ್ರ ಸಲ್ಲಿಸಲು ಅವಕಾಶವನ್ನು ಸಲ್ಲಿಸಲಾಗಿದೆ.

"ಸರ್ವೋತ್ತಮ ಸೇವಾ ಪ್ರಶಸ್ತಿ"ಯ ಎರಡು ಹಂತದ ಪ್ರಶಸ್ತಿಗಳಿಗೂ ಅರ್ಜಿ ಸಲ್ಲಿಸಬಯಸುವವರು, ಪ್ರತಿ ಹಂತಕ್ಕೂ ಪ್ರತ್ಯೇಕವಾಗಿ ತಮ್ಮ ನಾಮ ನಿರ್ದೇಶನವನ್ನು ಸಲ್ಲಿಸತಕ್ಕದ್ದು,

ನಾಮನಿರ್ದೇಶನವನ್ನು ಸಲ್ಲಿಸಬಯಸುವವರು ಜಾಲತಾಣ https://dparar.karnataka.gov.in/ ಅಥವಾ https://sarvothamaawards.karnataka.gov.in ದ ಮೂಲಕ 4 ನೇ ಏಪ್ರಿಲ್ 2022 ರೊಳಗಾಗಿ ಸಲ್ಲಿಸುವುದು. ಉಲ್ಲೇಖಿತ ಆದೇಶದ ಪ್ರತಿಗಳನ್ನು ಜಾಲತಾಣ https://dparar.karnataka.gov.in/ ರ ಸರ್ಕಾರದ ಆದೇಶಗಳು-ತರಬೇತಿ ಇಲ್ಲಿ ಅವಲೋಕಿಸ ಬಹುದಾಗಿದೆ.

| ಕ್ರಮ ಸಂಖ್ಯೆ | ಪ್ರಶಸ್ತಿ ವಿವರ | ಪ್ರಶಸ್ತಿಗಳ ಸಂಖ್ಯೆ |
|---|---|---|
| 1 | ಜಿಲ್ಲಾ ಮಟ್ಟ (31 ಜಿಲ್ಲೆX10 ಪ್ರಶಸ್ತಿ) | 310 |
| 2 | ರಾಜ್ಯ ಮಟ್ಟ | 30 |

ಜಾಲತಾಣದಲ್ಲಿ ಮಾಹಿತಿ/ವಿವರಗಳನ್ನು ದಾಖಲಿಸಲು ಯಾವುದೇ ರೀತಿಯ ತಾಂತ್ರಿಕ ಅಡಚಣೆ ಉಂಟಾದಲ್ಲಿ Help desk ಗೆ ದೂರವಾಣಿ ಮೂಲಕ ಕೇಳಕಂಡವರನ್ನು ಕಚೇರಿ ವೇಳೆಯಲ್ಲಿ ಮಾತ್ರ ಸಂಪರ್ಕಿಸುವುದು.

**ಶ್ರೀ ಮಂಜುನಾಥ್, ದೂ:080-22230060**

24/3/2022

**(ಜ್ಯೋತಿ ಆರ್.ಜೆ)**
ಸರ್ಕಾರದ ಉಪ ಕಾರ್ಯದರ್ಶಿ,
ಸಿಆಸುಇ (ಆಡಳಿತ ಸುಧಾರಣೆ).

BSF 24/3/2022

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಗೆ.
2. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ,
3. ಎಲ್ಲಾ ಜಿಲ್ಲಾಧಿಕಾರಿಯವರಿಗೆ.
4. ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರಿಗೆ.

} **ಕಛೇರಿ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.**

5. ಕಚೇರಿ ಪ್ರತಿ/ಹೆಚ್ಚುವರಿ ಪ್ರತಿ.